# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1433 (1616)
ಸದಸ್ಯರ ಹೆಸರು : ಶ್ರೀ ಟಿ.ಎನ್. ಜವರಾಯಿ ಗೌಡ
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 18.03.2026
ಉತ್ತರಿಸುವ ಸಚಿವರು : ಕಂದಾಯ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಭೂ ಪರಿವರ್ತನೆ ಇಲ್ಲದೆ ರೈತರ ಕೃಷಿ ಭೂಮಿಯಲ್ಲಿ ಮನೆ / ಫಾರಂ ಹೌಸ್ / ದನಗಳ ಕೊಟ್ಟಿಗೆ / ಹಿಪ್ಪುನೇರಲೆ ಸಾಗಾಣಿಕೆ / ಕೋಳಿ ಸಾಗಾಣಿಕೆ ಶೆಡ್ ಹಾಗೂ ಇತರ ಸಾಗಾಣಿಕೆ ಮನೆಗಳನ್ನು ನಿರ್ಮಿಸಿಕೊಳ್ಳಲು ಎಷ್ಟು ಗುಂಟೆ ಜಾಗವನ್ನು ಬಳಸಿಕೊಳ್ಳಲು ಅವಕಾಶವಿದೆ ; (ವಿವರ ನೀಡುವುದು) | ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95(1)ರಲ್ಲಿ ಕೃಷಿ ಜಮೀನಿನ ಒಟ್ಟು ವಿಸ್ತೀರ್ಣದ ಶೇಕಡ 10 ರಷ್ಟು ಮೀರದ ಜಮೀನಿನಲ್ಲಿ ಫಾರ್ಮ್ ಹೌಸ್ ಕಟ್ಟಿಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ, ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 11 ಎಲ್.ಜಿ.ಪಿ 2018, ದಿನಾಂಕ: 29.01.2018ರಲ್ಲಿ ಸೂಕ್ತ ನಿರ್ದೇಶನಗಳನ್ನು ನೀಡಲಾಗಿದೆ<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ. 28 ಎಲ್.ಜಿ.ಪಿ. 2022, ದಿನಾಂಕ: 07.11.2022ರಂತೆ ಕೋಳಿ ಸಾಕಾಣಿಕೆಗೆ ಬಳಕೆಯಾಗುವ ಜಮೀನಿಗೆ ಕಲಂ 95ರನ್ವಯ ಭೂ ಪರಿವರ್ತನೆಯಿಂದ ವಿನಾಯಿತಿ ನೀಡಲಾಗಿದೆ. |
| ಆ) | ರೈತರು ಮೇಲೆ ತಿಳಿಸಿರುವ ಮನೆಗಳನ್ನು ಕಟ್ಟಿಕೊಳ್ಳಲು ಪ್ರಾರಂಭಿಸಿದರೆ ಜಿಲ್ಲೆಯ ಕಂದಾಯ ಮತ್ತು ಸ್ಥಳೀಯ ಅಧಿಕಾರಿಗಳು ರೈತರಿಗೆ ನೋಟೀಸ್ ನೀಡುವುದು, ಕಟ್ಟುತ್ತಿರುವ ಮನೆಗಳನ್ನು ಸ್ಥಗಿತಗೊಳಿಸುವುದು ಹಾಗೂ ದಂಡ ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ; | ಸರ್ಕಾರದ ಗಮನಕ್ಕೆ ಬಂದಿಲ್ಲ. |
| ಇ) | ಬಂದಿದ್ದಲ್ಲಿ, ರೈತರ ರಕ್ಷಣೆಗಾಗಿ ಸರ್ಕಾರ ಸೂಕ್ತ ಆದೇಶವನ್ನು ಹೊರಡಿಸಲು ತಕ್ಷಣ ಕ್ರಮ ವಹಿಸುವುದೇ (ತಿಳಿಸುವುದು) ಈ ಬಗ್ಗೆ ಸರ್ಕಾರ ಆದೇಶ ಹೊರಡಿಸಿದ್ದಲ್ಲಿ, ಆದೇಶ / ಸುತ್ತೋಲೆ ಪ್ರತಿಯನ್ನು ಒದಗಿಸುವುದರೊಂದಿಗೆ ವಿವರವಾದ ಮಾಹಿತಿ ಒದಗಿಸುವುದು | ಕೃಷಿ ಭೂಮಿಯಲ್ಲಿ ಒಟ್ಟು ವಿಸ್ತೀರ್ಣದ ಶೇ.10 ರಷ್ಟು ಮೀರದ ಜಮೀನಿನಲ್ಲಿ ಫಾರ್ಮ್ ಹೌಸ್ ಕಟ್ಟಿಕೊಳ್ಳಲು ಕಾಯ್ದೆಯಲ್ಲಿ ಅವಕಾಶವಿರುವುದರಿಂದ ಅದರಂತೆ ಸುತ್ತೋಲೆಯನ್ವಯ ನಿರ್ದೇಶವನ್ನು ನೀಡಲಾಗಿರುವುದರಿಂದ ಮತ್ತೊಮ್ಮೆ ಸುತ್ತೋಲೆಯನ್ನು ಹೊರಡಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. ಸುತ್ತೋಲೆಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |

ಸಂಖ್ಯೆ: ಆರ್‌ಡಿ 60 ಎಲ್‌ಜಿಕ್ಯೂ 2026

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 11 ಎಲ್‌ಜಿಪಿ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ 29-01-2018.

## ಸುತ್ತೋಲೆ

ವಿಷಯ: ಕೃಷಿ ಭೂಮಿಯಲ್ಲಿ ನಿರ್ಮಿಸುವ Farm House ಕುರಿತು ಮಾರ್ಗಸೂಚಿಗಳು

* * *

ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95(1)ರ ಪರಂತುಕದಲ್ಲಿ ಕೃಷಿಕರು ಕೃಷಿ ಭೂಮಿಯ ಒಟ್ಟು ವಿಸ್ತೀರ್ಣದ ಶೇಕಡ 10 ರಷ್ಟು ಮೀರದ ಜಾಗದಲ್ಲಿ ಫಾರ್ಮ್‌ಹೌಸ್ ಕಟ್ಟಿಕೊಳ್ಳಬಹುದಾಗಿದೆ ಎಂದು ತಿಳಿಸಲಾಗಿದೆ. ಸದರಿ ಫಾರ್ಮ್‌ಹೌಸ್ ಅನ್ನು ಕೃಷಿಕರ ಹಾಗೂ ಅವರ ಕುಟುಂಬದ ವಾಸ್ತವ್ಯಕ್ಕಾಗಿ ಹಾಗೂ ಕೃಷಿ ಸಲಕರಣೆಗಳನ್ನು ಇಟ್ಟುಕೊಳ್ಳುವ ಸಲುವಾಗಿ ಮಾತ್ರ ಉಪಯೋಗಿಸತಕ್ಕದ್ದಾಗಿರುತ್ತದೆ. ಮುಂದುವರೆದು, ಸದರಿ ಫಾರ್ಮ್‌ಹೌಸ್ ಅನ್ನು ಬಾಡಿಗೆ ನೀಡಲಾಗಲೀ ಹಾಗೂ ಇತರ ವಾಣಿಜ್ಯ ಉದ್ದೇಶಕ್ಕಾಗಲೀ ಬಳಸಲು ಅವಕಾಶವಿರುವುದಿಲ್ಲ.

ಕೃಷಿಕರು ಕೃಷಿ ಭೂಮಿಯಲ್ಲಿನ ಫಾರಂ ಹೌಸ್ ಎಂದು ಪರಿಗಣಿಸುವ ಆಸ್ತಿಗಳಿಗೆ ಸಂಬಂಧಿಸಿದಂತೆ, ಈ ಕೆಳಕಂಡ ಸೂಚನೆಗಳನ್ನು ಅನುಸರಿಸುವಂತೆ ಈ ಮೂಲಕ ತಿಳಿಸಲಾಗಿದೆ:-

1. ಆರ್.ಟಿ.ಸಿ ಯಂತೆ ಭೂಮಿಯ ಮಾಲೀಕರು ಹೊಂದಿರುವ ವ್ಯವಸಾಯ ಜಮೀನಿನ ಗರಿಷ್ಠ ಶೇ.10 ರಷ್ಟು ಜಮೀನಿನಲ್ಲಿ ('ಬಿ' ಖರಾಬು ಜಮೀನನ್ನು ಹೊರತುಪಡಿಸಿ) ಫಾರ್ಮ್‌ಹೌಸ್, ಬಾವಿ ಅಥವಾ ಕೊಟ್ಟಿಗೆ ಇತ್ಯಾದಿಯನ್ನು ನಿರ್ಮಾಣ ಮಾಡಲು ಲಿಖಿತ ರೂಪದಲ್ಲಿ ತಮ್ಮ ಇಚ್ಛೆಯನ್ನು ಕಂದಾಯ ನಿರೀಕ್ಷಕರಿಗೆ ವ್ಯಕ್ತಪಡಿಸಬಹುದಾಗಿದೆ.

2. ಆರ್.ಟಿ.ಸಿಯಲ್ಲಿ ಭೂಮಾಲೀಕರ ಇಚ್ಛೆಯಂತೆ (ಸೂಚಿಸಲಾಗಿರುವ 10% ಮಿತಿಯೊಳಗೆ) ಫಾರ್ಮ್‌ಹೌಸ್ ಬಾವಿ ಅಥವಾ ಕೊಟ್ಟಿಗೆ ನಿರ್ಮಾಣದ ವಿವರವನ್ನು ಕಲಂ 11ರಲ್ಲಿ ನಮೂದಿಸಲು ಅನುವಾಗುವಂತೆ ಭೂಮಿ ತಂತ್ರಾಂಶದಲ್ಲಿ ಕಂದಾಯ ನಿರೀಕ್ಷಕರವರ ಲಾಗಿನ್‌ನಲ್ಲಿ ಹೊಸ ಸೌಲಭ್ಯವನ್ನು ಒದಗಿಸಲಾಗುತ್ತದೆ.

3. ಈ ನಿರ್ಮಾಣವು [illegible] ಉತ್ತಮ [illegible] ಅಥವಾ ವ್ಯವಸಾಯ ಉಪಯೋಗಕ್ಕಾಗಿದ್ದು, ಅದಕ್ಕೆ ಆದ ಸ್ವತಂತ್ರ ಅಸ್ತಿತ್ವವನ್ನು ಹೊಂದಿರದ ಕಾರಣ ಮತ್ತು ಯಾವುದೇ ಪರಿವರ್ತನೆಯಾಗಿರದ ಕಾರಣ, ಈ ನಿರ್ಮಾಣಕ್ಕೆ ಪ್ರತ್ಯೇಕವಾದ [illegible] ಸಂಖ್ಯೆಯನ್ನು ರಚಿಸತಕ್ಕದ್ದಲ್ಲ.

4. ಪ್ರಸ್ತಾಪಿತ ಫಾರ್ಮ್‌ಹೌಸ್ ಭಾಗದ ಆಸ್ತಿಯನ್ನು ಯಾವುದೇ ವ್ಯವಹಾರ ಅಥವಾ ಮಾರಾಟ ಮಾಡಬೇಕಾದ ಸಂದರ್ಭದಲ್ಲಿ ಅಥವಾ ಗ್ರಾಮ ಪಂಚಾಯಿತಿ/ಮುನಿಸಿಪಲ್ ಆಸ್ತಿ ಸಂಖ್ಯೆಯನ್ನು ನೀಡಬೇಕಾಗಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95ರಡಿ ಭೂ ಪರಿವರ್ತನೆಯು ಕಡ್ಡಾಯವಾಗಿರುತ್ತದೆ.

5. ಫಾರ್ಮ್‌ಹೌಸ್, ಬಾವಿ ಅಥವಾ ತೊಟ್ಟಿ ಇತ್ಯಾದಿ ನಿರ್ಮಾಣವು ಇತರೆ ಸಂಬಂಧಿಸಿದ ಕಾಯ್ದೆ ಮತ್ತು ನಿಯಮಗಳಿಗೆ ಒಳಪಟ್ಟಿರುತ್ತದೆ.

6. ಮೇಲಿನ ಸೂಚನೆಗಳನ್ನು ಭೂಮಿ ತಂತ್ರಾಂಶದಲ್ಲಿ ಸೂಕ್ತ ರೀತಿಯಲ್ಲಿ ಅಳವಡಿಸುವಂತೆ ಸೂಚಿಸಲಾಗಿದೆ.

29.1.18
(ಎಸ್.ಎಲ್.ಮಹಾಂತೇಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಭೂಮಂಜೂರಾತಿ-1).

ಇವರಿಗೆ:

1. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಕಲಬುರಗಿ ವಿಭಾಗ.
2. ಎಲ್ಲಾ ಜಿಲ್ಲಾಧಿಕಾರಿಗಳಿಗೆ.
3. ಎಲ್ಲಾ ಉಪ ವಿಭಾಗಾಧಿಕಾರಿಗಳಿಗೆ (ಜಿಲ್ಲಾಧಿಕಾರಿಗಳ ಮುಖಾಂತರ).
4. ಎಲ್ಲಾ ತಹಶೀಲ್ದಾರ್‌ರವರುಗಳಿಗೆ (ಜಿಲ್ಲಾಧಿಕಾರಿಗಳ ಮುಖಾಂತರ).
5. ಹೆಚ್ಚುವರಿ ಪ್ರತಿಗಳು.

ಪ್ರತಿಯನ್ನು:

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ.
3. ಸರ್ಕಾರದ ಅಪರ/ಉಪ/ಅಧೀನ ಕಾರ್ಯದರ್ಶಿ/ಪೀಠಾಧಿಕಾರಿಗಳು, ಕಂದಾಯ ಇಲಾಖೆ.

**ಕರ್ನಾಟಕ ಸರ್ಕಾರ**

**ಸಂಖ್ಯೆ:** ಆರ್‌ಡಿ 28 ಎಲ್‌ಜಿಪಿ 2022

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 07.11.2022

**ಸುತ್ತೋಲೆ**

**ವಿಷಯ:** ಕೋಳಿ ಸಾಕಾಣಿಕೆಗಾಗಿ ಉಪಯೋಗಿಸುವ ಕೃಷಿ ಭೂಮಿಯನ್ನು ಭೂ ಪರಿವರ್ತನೆಯಿಂದ ವಿನಾಯಿತಿ ನೀಡುವ ಕುರಿತು.

**ಉಲ್ಲೇಖ:** ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಇ-ಪಸಂಮೀ 5 ಕಕೋಮ 2022(ಭಾಗ-2) ದಿನಾಂಕ: 17.10.2022

* * *

ಕೃಷಿ ಜಮೀನನ್ನು ಇತರೆ ಉದ್ದೇಶಗಳಿಗೆ ಉಪಯೋಗಿಸುವುದಕ್ಕೆ ಸಂಬಂಧಿಸಿದಂತೆ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95 (2)ರಡಿ ಕಂದಾಯ ವಿಧಿಸಲಾಗಿರುವ ಅಥವಾ ಬೇಸಾಯದ ಉದ್ದೇಶಕ್ಕಾಗಿ ಹೊಂದಿರುವ ಭೂಮಿಯ ಯಾವನೇ ಅಧಿಭೋಗದಾರನು ಅಂಥ ಭೂಮಿಯನ್ನು ಅಥವಾ ಅದರ ಯಾವುದೇ ಭಾಗವನ್ನು ಯಾವುದೇ ಇತರ ಉದ್ದೇಶಕ್ಕಾಗಿ ಬದಲಿಸಲು ಇಚ್ಛಿಸಿದರೆ ಅವನು (ತತ್ಕಾಲದಲ್ಲಿ ಜಾರಿಯಲ್ಲಿರುವಂತೆ ಯಾವುದೇ ಕಾನೂನಿನಲ್ಲಿ ಏನೇ ಇದ್ದಾಗ್ಯೂ) ಅನುಮತಿಗಾಗಿ ಜಿಲ್ಲಾಧಿಕಾರಿಗೆ ಅರ್ಜಿಯನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಕರ್ನಾಟಕ ಭೂ ಸುಧಾರಣೆ ಕಾಯ್ದೆ, 1961ರ ಕಲಂ 2-(A)(1)(d)ರಲ್ಲಿ ಕೋಳಿ ಸಾಕಾಣಿಕೆ (Poultry Farming)ಯನ್ನು "ಕೃಷಿ" ಎಂದು ವ್ಯಾಖ್ಯಾನಿಸಲಾಗಿರುವುದರಿಂದ ಕೋಳಿ ಸಾಕಾಣಿಕೆಗೆ ಬಳಕೆಯಾಗುವ ಜಮೀನಿಗೆ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95ರಡಿ ಭೂ ಪರಿವರ್ತನೆಯಿಂದ ವಿನಾಯಿತಿ ನೀಡಲಾಗಿದೆ.

**(ಸಿ. ಬಲರಾಮ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ, (ಭೂ ಮಂಜೂರಾತಿ-1).

**ಇವರಿಗೆ,**

1. ಸರ್ಕಾರದ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಕೆ.ಆರ್ ವೃತ್ತ, ಬೆಂಗಳೂರು-560 001.
3. ನಿರ್ದೇಶಕರು, ಭೂಮಿ, ಯುಪಿಓಆರ್ ಮತ್ತು ಮೇಲ್ವಿಚಾರಣಾ ಕೋಶ, ಕೆ.ಆರ್.ಸರ್ಕಲ್, ಬೆಂಗಳೂರು.
4. ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಕಂದಾಯ ಭವನ, 8ನೇ ಮಹಡಿ, ಕೆ.ಜಿ.ರಸ್ತೆ, ಬೆಂಗಳೂರು-560 001.
5. ಎಲ್ಲಾ ಪ್ರಾದೇಶಿಕ ಆಯುಕ್ತರು.
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
7. ಎಲ್ಲಾ ಕಾರ್ಯ ನಿರ್ವಾಹಕಾಧಿಕಾರಿಗಳು.

8. ರಾಜ್ಯದ ಎಲ್ಲಾ ಉಪವಿಭಾಗಾಧಿಕಾರಿಗಳು (ಜಿಲ್ಲಾಧಿಕಾರಿಗಳ ಮುಖಾಂತರ)
9. ಎಲ್ಲಾ ಉಪನೋಂದಣಾಧಿಕಾರಿಗಳು (ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರ ಮುಖಾಂತರ).
10. ರಾಜ್ಯದ ಎಲ್ಲಾ ತಹಶೀಲ್ದಾರರುಗಳು (ಜಿಲ್ಲಾಧಿಕಾರಿಗಳ ಮುಖಾಂತರ)
11. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**ಪ್ರತಿ**:
1. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕಂದಾಯ ಇಲಾಖೆ (ಭೂ ಮಂಜೂರಾತಿ & ಭೂ ಸುಧಾರಣೆ)
3. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಸಹಾಯಕರು ಕಂದಾಯ ಇಲಾಖೆ (ಸಮನ್ವಯ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಎಲ್ಲಾ ಅಧೀನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಪೀಠಾಧಿಕಾರಿಗಳು, ಭೂ ಮಂಜೂರಾತಿ-2, ಬಹುಮಹಡಿಗಳ ಕಟ್ಟಡ, ಬೆಂಗಳೂರು.

****